ಪ್ರವಾಸೋದ್ಯಮ ಅಭಿವೃದ್ಧಿಪಡಿಸುವುದು

36 (71) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ):- ಮಾನ್ಯ ಪ್ರವಾಸೋದ್ಯಮ, ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ಯುವಜನಸೇವೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ರಾಜ್ಯದಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸುವ ಸಲುವಾಗಿ ಎಷ್ಟು ಹಣವನ್ನು ಒದಗಿಸಲಾಗುವುದು;

ಆ) ಈ ಹಣದಿಂದ ವಿವಿಧ ಜಿಲ್ಲೆಗಳ ಪ್ರವಾಸಿ ತಾಣಗಳಲ್ಲಿ ಯಾವ ಯಾವ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುವುದು (ಪೂರ್ಣ ವಿವರಗಳನ್ನು ಒದಗಿಸುವುದು);

ಇ) ಬೀದರ್ ಜಿಲ್ಲೆಯಲ್ಲಿ ಹಾಗೂ ಭಾಲ್ಕಿ ವಿಧಾನ ಸಭಾ ಕ್ಷೇತ್ರಗಳಲ್ಲಿ ಯಾವ ಯಾವ ಪ್ರವಾಸಿ ತಾಣಗಳಲ್ಲಿ ಪ್ರಸಕ್ತ ಸಾಲಿನಲ್ಲಿ ಯಾವ ಯಾವ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುವುದು ಹಾಗೂ ಇವುಗಳಿಗೆ ತಗಲುವ ಅಂದಾಜು ವೆಚ್ಚವೆಷ್ಟು;

ಈ) ರಾಜ್ಯದ ಪ್ರವಾಸಿ ತಾಣಗಳ ಅಭಿವೃದ್ಧಿಗಾಗಿ ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬಂದಿರುವ ಹಣಕಾಸಿನ ನೆರವಿನ ಮೊತ್ತವೆಷ್ಟು; ಈ ಹಣದಿಂದ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಕಲ್ಪಿಸಲಾಗಿದೆ;

ಶ್ರೀ ಜಿ. ಜನಾರ್ಧನ ರೆಡ್ಡಿ (ಪ್ರವಾಸೋಧ್ಯಮ, ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ಯುವಜನಸೇವೆ ಸಚಿವರು):

ಅ) ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ರಾಜ್ಯದಲ್ಲಿ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಹಾಗೂ ಮೂಲ ಸೌಕರ್ಯ ಅಭಿವೃದ್ಧಿಗಾಗಿ ರೂ.222.12 ಕೋಟಿಗಳನ್ನು ಒದಗಿಸಲಾಗಿದೆ.

ಆ) ಈ ಹಣವನ್ನು ವಿವಿಧ ಜಿಲ್ಲೆಗಳಲ್ಲಿರುವ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರಿಗೆ ಅಗತ್ಯ ಮೂಲಭೂತ ಸೌಲಭ್ಯಗಳಾದ ಶೌಚಾಲಯ, ಆಸನಗಳ ವ್ಯವಸ್ಥೆ, ಡಾರ್ಮಿಟರಿ ವಸತಿ, ಯಾತ್ರಿನಿವಾಸ, ಸೌಲಭ್ಯಗಳನ್ನು ಒದಗಿಸಲಾಗುವುದು. ಇದರ ಜೊತೆಗೆ ವಾಹನಗಳ ನಿಲ್ದಾಣ, ಲ್ಯಾಂಡ್ ಸ್ಕೇಪಿಂಗ್, ಉದ್ಯಾನವನ ಅಭಿವೃದ್ಧಿ ಧ್ವನಿ ಮತ್ತು ಬೆಳಕು ಯೋಜನೆ, ಸೈನೇಜುಗಳು, ಹೋರ್ಡಿಂಗ್‌ಗಳು ಮತ್ತು ರಸ್ತೆ ಅಭಿವೃದ್ಧಿ ಮುಂತಾದ ಕ್ರಿಯಾ ಯೋಜನೆ ಅಂತಿಮಗೊಳಿಸಲಾಗುತ್ತಿದೆ.

ಇ) ಕ್ರಿಯಾ ಯೋಜನೆ ಅಂತಿಮಗೊಳಿಸಿದ ನಂತರ ಈ ಮಾಹಿತಿಗಳೂ ಲಭ್ಯವಾಗುತ್ತವೆ.

ಈ) ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಮಂಜೂರು ಮಾಡಿರುವ ಮತ್ತು ಬಿಡುಗಡೆ ಮಾಡಿರುವ ಆರ್ಥಿಕ ನೆರವಿನ ಮೊತ್ತ:

ವರ್ಷ	ಮಂಜೂರಿ ಮೊತ್ತ (ರೂ.ಲಕ್ಷಗಳಲ್ಲಿ)	ಬಿಡುಗಡೆ ಮೊತ್ತ (ರೂ.ಲಕ್ಷಗಳಲ್ಲಿ)
2008–09	4528.27	2421.49
2009–10	3832.18	3065.74
2010–11	859.97	687.97

1. ಸಂಗಮ (ಮೇಕೆದಾಟು–ರಾಮನಗರ)ದಲ್ಲಿ ಪ್ರವಾಸಿ ಮೂಲಭೂತ ಸೌಲಭ್ಯ ಅಭಿವೃದ್ಧಿ.
2. ವಿಶ್ವ ಪರಂಪರಾ ಕೇಂದ್ರವಾದ ಹಂಪಿಯಲ್ಲಿ ಪ್ರವಾಸಿ ಮೂಲಭುತ ಸೌಲಭ್ಯ ಅಭಿವೃದ್ಧಿ.
3. ಚನ್ನಗಿರಿ ತಾಲ್ಲೂಕು ಶಾಂತಿಸಾಗರ ಕೆರೆ ಬಳಿ ಪ್ರವಾಸಿ ಮೂಲಭೂತ ಸೌಲಭ್ಯ ಅಭಿವೃದ್ಧಿ.
4. ಚಿಕ್ಕಬಳ್ಳಾಪುರ ಜಿಲ್ಲ, ವಿಧುರಾಶ್ವತ್ಥದಲ್ಲಿರುವ ಪ್ರವಾಸಿ ಮೂಲಭೂತ ಸೌಲಭ್ಯ ಅಭಿವೃದ್ಧಿ.
5. ಮಲೆನಾಡು ಸರ್ಕ್ಯೂಟ್‌ಗಳಾದ ಹಾಸನ, ಚಿಕ್ಕಮಗಳೂರು ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಪ್ರವಾಸಿ ಮೂಲಭೂತ ಸೌಲಭ್ಯ ಅಭಿವೃದ್ಧಿ.
6. ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರು, ಧರ್ಮಸ್ಥಳ, ಕುಕ್ಕೆ ಸುಬ್ರಮಣ್ಯ, ಕಟೀಲು ದೇವಾಲಯಗಳ ಸರ್ಕ್ಯೂಟ್‌ಗಳಲ್ಲಿ ಪ್ರವಾಸಿ ಮೂಲಭೂತ ಸೌಲಭ್ಯ ಅಭಿವೃದ್ಧಿ.
7. ಶೃಂಗೇರಿ, ಉಡುಪಿ, ಕಾರ್ಕಳ ಧಾರ್ಮಿಕ ಸರ್ಕ್ಯೂಟ್‌ಗಳಲ್ಲಿ ಪ್ರವಾಸಿ ಮೂಲಭೂತ ಸೌಲಭ್ಯ ಅಭಿವೃದ್ಧಿ.
8. ಬೀದರ್ ಜಿಲ್ಲೆ ವಿಲಾಸಪುರ ಕೆರೆ ಬಳಿ ಅರಣ್ಯ ವಸತಿ ಮತ್ತು ವಿಹಾರಧಾಮಗಳ ಸಂಸ್ಥೆಯ ವತಿಯಿಂದ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ.
9. ಬೀದರ್ ಕೋಟ್ ಅಭಿವೃದ್ಧಿ.

10. ಬೀದರ್ ಜಿಲ್ಲೆಯ ಚೌಕಂಡಿ ಮತ್ತು ಅಸ್ಟೂರು ಟೂಂಬ್ಸ್ ಇಲ್ಲಿ ಪ್ರವಾಸಿ ಮೂಲಭೂತ ಸೌಲಭ್ಯ ಅಭಿವೃದ್ಧಿ.
11. ಯಾದಗಿರಿ ಜಿಲ್ಲೆಯ ಶಹಪುರ ಹತ್ತಿರ ಇರುವ ಸ್ಲೀಪಿಂಗ್ ಬುದ್ಧ ಬೆಟ್ಟದ ಬಳಿ ಪ್ರವಾಸಿ ಮೂಲಭೂತ ಸೌಲಭ್ಯ ಅಭಿವೃದ್ಧಿ.
12. ಬಳ್ಳಾರಿ ಜಿಲ್ಲೆಯ ಹಂಪಿ ಬಳಿ ಇರುವ ದರೋಜಿ ಕರಡಿ ಧಾಮದ ಬಳಿ ಅರಣ್ಯ ವಸತಿ ಮತ್ತು ವಿಹಾರಧಾಮಗಳ ಸಂಸ್ಥೆಯ ವತಿಯಿಂದ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ.
13. ಹಾವೇರಿ ಜಿಲ್ಲೆ, ಕಾಗಿನೆಲೆಯಲ್ಲಿ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ.
14. ಶಿವಮೊಗ್ಗ ಜಿಲ್ಲೆ ಸಾಗರ ತಾಲ್ಲೂಕು ತಳಕಳಲೆ ಬಳಿ ಪರಿಸರ ಮತ್ತು ಸಾಹಸ ಪ್ರವಾಸೋದ್ಯಮ ಅಭಿವೃದ್ಧಿ.
15. ಬೆಳಗಾವಿ ಜಿಲ್ಲೆ, ಖಾನಪುರ ಅರಣ್ಯ ಪ್ರದೇಶದಲ್ಲಿ ಪರಿಸರ ಮತ್ತು ಸಾಹಸ ಪ್ರವಾಸೋದ್ಯಮ ಅಭಿವೃದ್ಧಿ.
16. ದಕ್ಷಿಣ ಕನ್ನಡ ಜಿಲ್ಲೆ, ಪಿಲಿಕುಳ ನಿಸರ್ಗಧಾಮ ಪ್ರದೇಶದಲ್ಲಿ ಪರಿಸರ ಪ್ರವಾಸೋದ್ಯಮ ರೆಸಾರ್ಟ್ ಅಭಿವೃದ್ಧಿ.

ಗೃಹ ಮಂಡಳಿಯ ಮನೆಗಳು

35 (70) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ):– ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ಗೃಹ ಮಂಡಳಿಯು ತನ್ನ ಸಂಪನ್ಮೂಲಗಳಿಂದ ಹಾಗೂ ಖಾಸಗಿ ಸಹಭಾಗಿತ್ವದಲ್ಲಿ ಬೀದರ್ ಜಿಲ್ಲೆಯಲ್ಲಿ ವಿಶೇಷವಾಗಿ ಭಾಲ್ಕಿ ಮತ ಕ್ಷೇತ್ರದಲ್ಲಿ ಕೈಗೆಟಕುವ ದರದಲ್ಲಿ ಎಷ್ಟು ಮನೆಗಳನ್ನು ನಿರ್ಮಿಸುವ ಗುರಿಯನ್ನು ಹೊಂದಿದೆ;

ಆ) ಇದಕ್ಕಾಗಿ, ಯಾವ ಯಾವ ಸ್ಥಳನಗಳನ್ನು ಆಯ್ಕೆ ಮಾಡಲಾಗಿದೆ ಹಾಗೂ ಎಷ್ಟು ಭೂಮಿಯನ್ನು ಸ್ವಾಧೀನ ಪಡಿಸಿ ಕೊಳ್ಳಲಾಗಿದೆ; ಈ ಯೋಜನೆಯ ಅನುಷ್ಠಾನಕ್ಕಾಗಿ ಯಾವ ಖಾಸಗಿ ಸಂಸ್ಥೆಗಳು ಗೃಹ ಮಂಡಳಿ ಯೊಂದಿಗೆ ಕೈ ಜೋಡಿಸಲಿವೆ (ಪೂರ್ಣ ವಿವರಗಳನ್ನು ಒದಗಿಸುವುದು);

ಇ) ಈ ಯೋಜನೆಯ ಅನುಷ್ಠಾನಕ್ಕಾಗಿ ರಾಜ್ಯ ಸರ್ಕಾರವು ಪ್ರಸಕ್ತ ಅಯವ್ಯಯದಲ್ಲಿ ಎಷ್ಟು ಹಣವನ್ನು ನಿಗದಿಪಡಿಸಿದೆ?

ಶ್ರೀ ವಿ. ಸೋಮಣ್ಣ (ಮಾನ್ಯ ವಸತಿ ಸಚಿವರು):